CCE-II-RR/PR/PF/NSR/NSPR(A)/888/4051

**A**

# ಜೂನ್ 2024 ರ ಪರೀಕ್ಷೆ - 2
# JUNE 2024 EXAMINATION - 2

ಒಟ್ಟು ಮುದ್ರಿತ ಪುಟಗಳ ಸಂಖ್ಯೆ : 12 ]
Total No. of Printed Pages : 12 ]

ಒಟ್ಟು ಪ್ರಶ್ನೆಗಳ ಸಂಖ್ಯೆ : 38 ]
Total No. of Questions : 38 ]

**CCE RR/PR/PF/ NSR/NSPR**
**FULL SYLLABUS**

Question Paper Serial No.

**ಸಂಕೇತ ಸಂಖ್ಯೆ : 33-K**
**Code No. : 33-K**

## ವಿಷಯ : ದ್ವಿತೀಯ ಭಾಷೆ — ಕನ್ನಡ
## Subject : Second Language — KANNADA

**(ಶಾಲಾ ಪುನರಾವರ್ತಿತ ಅಭ್ಯರ್ಥಿ / ಖಾಸಗಿ ಪುನರಾವರ್ತಿತ ಅಭ್ಯರ್ಥಿ / ಖಾಸಗಿ ಅಭ್ಯರ್ಥಿ / ಎನ್.ಎಸ್.ಆರ್. / ಎನ್.ಎಸ್.ಪಿ.ಆರ್.)**
**(Regular Repeater / Private Repeater / Private Fresh / NSR / NSPR)**

ದಿನಾಂಕ : 21. 06. 2024 ] [ Date : 21. 06. 2024

ಸಮಯ : ಬೆಳಗ್ಗೆ 10-15 ರಿಂದ ಮಧ್ಯಾಹ್ನ 1-15 ರವರೆಗೆ ] [ Time : 10-15 A.M. to 1-15 P.M.

ಗರಿಷ್ಠ ಅಂಕಗಳು : 80 ] [ Max. Marks : 80

***ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :***

**Cut here/ಇಲ್ಲಿ ಕತ್ತರಿಸಿ**

1. ಈ ಪ್ರಶ್ನೆಪತ್ರಿಕೆಯು ಒಟ್ಟು 38 ಪ್ರಶ್ನೆಗಳನ್ನು ಹೊಂದಿದೆ.
2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ***ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ (ಬಾಣವನ್ನು ಅನುಸರಿಸಿ), ಎಡಬದಿ ಪಾರ್ಶ್ವವನ್ನು ಕತ್ತರಿಸಬೇಡಿ.*** ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.
3. ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.
4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.
5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.
6. ನಿಮಗೆ ವಿತರಿಸಲಾಗಿರುವ ಪ್ರಶ್ನೆಪತ್ರಿಕೆಯ ಆವೃತ್ತಿ ( Version ) ಮತ್ತು ನಿಮ್ಮ ಪ್ರವೇಶ ಪತ್ರದಲ್ಲಿ ಮುದ್ರಿತವಾಗಿರುವ ಪ್ರಶ್ನೆಪತ್ರಿಕೆಯ ಆವೃತ್ತಿ ಒಂದೇ ಆಗಿರುವುದನ್ನು ಖಾತರಿಪಡಿಸಿಕೊಳ್ಳಿ.

ಇಲ್ಲಿಂದ ಕತ್ತರಿಸಿ

**21. 06. 2024**

**TEAR HERE TO OPEN THE QUESTION PAPER**
**ಪ್ರಶ್ನೆಪತ್ರಿಕೆಯನ್ನು ತೆರೆಯಲು ಇಲ್ಲಿ ಕತ್ತರಿಸಿ**

**Tear here**

I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ, ಅದರ ಕ್ರಮಾಕ್ಷರದೊಂದಿಗೆ ಬರೆಯಿರಿ : $4 \times 1 = 4$

1. ದ್ವಿರುಕ್ತಿಗೆ ಉದಾಹರಣೆ

(ಎ) ಚಿಲಿಪಿಲಿ

(ಬಿ) ನೋವು ನಲಿವು

(ಸಿ) ತಲೆದೂಗು

(ಡಿ) ಹೊಚ್ಚ ಹೊಸದು

2. ಹೊಂಬಾಳೆ ಇದು

(ಎ) ತತ್ಪುರುಷ ಸಮಾಸ

(ಬಿ) ಅಂಶಿ ಸಮಾಸ

(ಸಿ) ಕರ್ಮಧಾರಯ ಸಮಾಸ

(ಡಿ) ದ್ವಿಗು ಸಮಾಸ

3. ಆಗಮ ಸಂಧಿಗೆ ಉದಾಹರಣೆಯಾದ ಪದ

(ಎ) ಒಂದೊಂದು

(ಬಿ) ಕೈಯಲ್ಲಿ

(ಸಿ) ಕೊಳಲೂದಿ

(ಡಿ) ಮೇಲೇಳು

4. ರುಚಿಯನ್ನು ಪದದಲ್ಲಿರುವ ವಿಭಕ್ತಿ

(ಎ) ದ್ವಿತೀಯಾ

(ಬಿ) ಪಂಚಮೀ

(ಸಿ) ತೃತೀಯಾ

(ಡಿ) ಸಪ್ತಮೀ

**II. ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ : 12 × 1 = 12**

5. ದೇಶದ ಉದ್ಧಾರ ಯಾರ ಯಾರನ್ನು ಅವಲಂಬಿಸಿದೆ ಎಂದು ಲೇಖಕರು ಹೇಳಿದ್ದಾರೆ ?

6. ತಾಯಿ ಸಿದ್ಧಮ್ಮ ಪಂಚಾಕ್ಷರಿ ಗವಾಯಿಗಳಲ್ಲಿ ಏನೆಂದು ಬೇಡಿಕೊಂಡಳು ?

7. ಹಕ್ಕಿಗೂಡಿನಲ್ಲಿ ಯಾವುದರ ಸಮನ್ವಯತೆ ಇದೆ ?

8. ವಿದ್ಯಾರ್ಥಿಗಳು ಕಾಫೀ ಕುಡಿಯಲು ಎಂತಹ ಕಪ್ಪುಗಳನ್ನು ಆರಿಸಿಕೊಂಡರು ?

9. ಥೇಮ್ಸ್ ನದಿ ದಡದಲ್ಲಿರುವ ಜನವಸತಿಯನ್ನು ಲೇಖಕರು ಯಾವುದಕ್ಕೆ ಹೋಲಿಸಿದ್ದಾರೆ ?

10. ಗೋಪಾಲನ ಬೆಳಗಿನ ಮುಖ್ಯ ಕೆಲಸ ಯಾವುದಾಗಿತ್ತು ?

11. ಕಾಡನ್ನು ಅಲೆದ ಸಿದ್ಧಾರ್ಥನಿಗೆ ಹೊಳೆದುದ್ದೇನು ?

12. ಕವಿ ಸಿ.ಪಿ.ಕೆ. ಅವರು ನಮ್ಮ ಕರ್ತವ್ಯಗಳನ್ನು ಹೇಗೆ ಮುಗಿಸಬೇಕೆಂದು ಹೇಳಿದ್ದಾರೆ ?

13. ಜನಪದರು ಕುಣಿಗಲ್ ಕೆರೆ ಹೇಗೆ ಬಾಗಿದೆ ಎಂದು ಹೇಳಿದ್ದಾರೆ ?

14. ಧನವಿದ್ದವರಲ್ಲಿ ಇರಬೇಕಾದ ಗುಣ ಯಾವುದು ?

15. ಕೌರವನ ಸೇನೆ ಉತ್ತರನಿಗೆ ಹೇಗೆ ಕಾಣಿಸಿತು ?

16. ಧುರಕೆ ಬೆನ್ನುಹಾಕಿದರೆ ಏನು ಪ್ರಾಪ್ತಿಯಾಗುತ್ತದೆ ?

III. ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ : **8 × 2 = 16**

17. ರೈತರು ಎದುರಿಸುತ್ತಿರುವ ಸಮಸ್ಯೆಗಳು ಯಾವುವು ?

18. ಹಕ್ಕಿಗೂಡಿನಲ್ಲಿ ಬದುಕಿನ ಯಾವ ಯಾವ ಅನುಭವಗಳಿವೆ ?

19. ನೀಲಿ ಸಾಮ್ರಾಟ ಹಾಗೂ ಸಗ್ಗದ ಹಕ್ಕಿಗೂಡುಗಳ ವಿಶೇಷತೆಯನ್ನು ವಿವರಿಸಿ.

20. ಹೆಡ್ ಮಾಸ್ತರರು ತಂದಿಟ್ಟ ಟ್ರೇನಲ್ಲಿ ಯಾವ ಯಾವ ತರಹದ ಕಪ್ಪುಗಳಿದ್ದವು ?

21. ಸಿದ್ಧಾರ್ಥ ಬುದ್ಧನಾದ ಸಂದರ್ಭದಲ್ಲಿ ಕಾಡಿನ ತುಂಬ ಪ್ರೀತಿ ಹೇಗೆ ತುಂಬಿಕೊಂಡಿತು ?

22. ಬಾಳೆಮೀನುಗಳು ಬೊಬ್ಬೆ ಹೊಡೆಯಲು ಕಾರಣವೇನು ?

23. ವೈದ್ಯರು ಭೀಮನಾಯಕನ ಮಗುವಿನ ಪ್ರಾಣ ಉಳಿಸಿದ ಬಗೆಯನ್ನು ವಿವರಿಸಿ.

24. ಕವಯಿತ್ರಿ ಮನುಕುಲದ ಭವ್ಯಬದುಕು ಹೇಗೆ ಅರಳಬೇಕು ಎಂದಿದ್ದಾರೆ ಎಂಬುದನ್ನು ವಿವರಿಸಿ.

**IV. ಕೆಳಗಿನ ಕವಿ / ಸಾಹಿತಿಯ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ :** **1 × 3 = 3**

25. ಅ.ರಾ. ಮಿತ್ರ

**V. ಕೆಳಗಿನ ಪದ್ಯದ ಸಾರಾಂಶವನ್ನು ವಾಕ್ಯರೂಪದಲ್ಲಿ ಬರೆಯಿರಿ :** **1 × 3 = 3**

26. ವೇಷಧರಿಸಿ ಫಲವೇನಯ್ಯ
ವೇಷದಂತಾಚರಣೆ ಇಲ್ಲದನ್ನಕ್ಕ
ವೇದಾಂತವನೋದಿ ಫಲವೇನಯ್ಯ
ಬ್ರಹ್ಮ ತಾನಾಗದನಕ್ಕ
ನಾನಾ ಕೆರೆಯ ತೋಡಿ ಫಲವೇನಯ್ಯ
ಪುಣ್ಯತೀರ್ಥಗಳು ಬರದನ್ನಕ್ಕ ಕಪಿಲಸಿದ್ಧ ಮಲ್ಲಿಕಾರ್ಜುನ

**VI. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ :** **1 × 3 = 3**

27. ಹೂಬನ ಸಾವಿರಾರು ಮಳೆಬಿಲ್ಲುಗಳು ಸೇರಿ ಕುಣಿದಂತೆ ಮನೋಹರವಾಗಿತ್ತು.

**VII. ಕೆಳಗೆ ಕೊಟ್ಟಿರುವ ಗಾದೆಮಾತುಗಳಲ್ಲಿ ಯಾವುದಾದರೂ ಒಂದನ್ನು ಆರಿಸಿಕೊಂಡು, ವಿಸ್ತರಿಸಿ ಬರೆಯಿರಿ :** **1 × 3 = 3**

28. ಕೈಕೆಸರಾದರೆ ಬಾಯಿ ಮೊಸರು.

**ಅಥವಾ**

ಪೆನ್ನು ಖಡ್ಗಕ್ಕಿಂತ ಹರಿತ.

**VIII. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ :** **5 × 3 = 15**

29. "ಸಮಾಜದ ಹಣದಿಂದ ನನಗೆ ವಿದ್ಯೆ ಕೊಟ್ಟಿದ್ದಾರೆ."

30. "ಲಂಡನ್ ಮಲಗಿ ನಿದ್ರಿಸುತ್ತದೆಯೇ ಅನಿಸುತ್ತದೆ."

31. "ಆ ಗೋಪಾಲ ಕೊಡಬೇಕು, ನಾವು ಉಣಬೇಕು"

32. "ಸಿಡುಕು ಮಿಡುಕನು ತೊರೆದು ಮೌನಿಯಾಗು."

33. "ಎಮ್ಮರಮನೆಯ ನಾರಿಯರೆ ಸಾಕು."

**IX. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ : 1 × 4 = 4**

34. ಯುಗದ ಹಿಂದಿನ ..............................................

..................................................................

..................................................................

.......................................... ತುಂಬ ಸವಿಚೈತ್ರವು.

**ಅಥವಾ**

ಕೊರಡ ಕೊನರಿಸಿ ..............................................

..................................................................

..................................................................

.......................................... ಕಲರವಕೆ ಮತ್ತೇರಿದೆ.

**X. ಕೆಳಗಿನ ಪ್ರಶ್ನೆಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ : 1 × 4 = 4**

35. ನರನ ಜೀವನದ ಗುರಿ ಯಾವುದಾಗಿರಬೇಕೆಂದು ಅಡಿಗರು ಆದೇಶಿಸಿರುವುದನ್ನು ನೀವು ಮೆಚ್ಚುವ ಅಂಶಗಳೊಂದಿಗೆ ವಿವರಿಸಿ.

**ಅಥವಾ**

ಗುರಿ ಪದ್ಯದ ಸಾರಾಂಶವನ್ನು ಸ್ವಾರಸ್ಯ ಪೂರ್ಣವಾಗಿ ನಿಮ್ಮ ಮಾತುಗಳಲ್ಲಿ ವರ್ಣಿಸಿ ಬರೆಯಿರಿ.

**XI. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ :**

**1 × 4 = 4 ( 2 + 2 )**

36. ಹುಟ್ಟಿದವರೆಲ್ಲರಿಗೂ ಸಾಧಕರಾಗುವುದಕ್ಕೆ ಅವಕಾಶವಿದ್ದರೂ ಎಲ್ಲರೂ ಸಾಧಕರಾಗುವುದಿಲ್ಲ. ಸಾಧಕರಾಗುವುದಕ್ಕೆ ಅಪಾರವಾದ ಸಾಮಾಜಿಕ ಹೊಣೆಗಾರಿಕೆ, ಪರಿಶ್ರಮ, ಭವಿಷ್ಯತ್ ಚಿಂತನೆ, ಛಲವಂತಿಕೆ ಬೇಕಾಗುತ್ತದೆ. ಸಾಧನೆಯ ಪಥದಲ್ಲಿ ಎದುರಾಗುವ ಅಡ್ಡಿ ಆತಂಕಗಳನ್ನು ನಿವಾರಿಸಿಕೊಳ್ಳಬೇಕು. ಇಂತಹ ಅಪರೂಪದ ಸಾಧಕರನ್ನು ಸಮಾಜ ನಿತ್ಯ ಸ್ಮರಿಸುತ್ತದೆ. ಅಂತಹ ಸಾಧಕರಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರು ಒಬ್ಬರಾಗಿದ್ದಾರೆ. ಇವರ ಆಡಳಿತದ ಅವಧಿಯಲ್ಲಿ ಪ್ರಜಾ ಪ್ರತಿನಿಧಿ ಸಭೆಯು ನೂತನ ರೂಪವನ್ನು ಪಡೆದು ನಿಜವಾದ ಜನ ಪ್ರತಿನಿಧಿ ಸಭೆಯಾಗಿ ಪರಿವರ್ತನೆಯಾಯಿತು. 1907 ರಲ್ಲಿ ನ್ಯಾಯ ವಿಧಾಯಕ ಸಭೆಯನ್ನು ಸ್ಥಾಪಿಸಿ. ಪ್ರಜಾಪ್ರತಿನಿಧಿ ಸಭೆಯಲ್ಲಿ ಮಂಡಿಸಿದ ಎಲ್ಲ ವಿಷಯಗಳನ್ನು ವಿಮರ್ಶಿಸುವ ಹಾಗೂ ಕಾನೂನು ಜಾರಿಗೊಳಿಸುವ ಅಧಿಕಾರ ನೀಡಿದರು. ಇದರಿಂದ ಮೈಸೂರು ರಾಜ್ಯ ಭರತಖಂಡದಲ್ಲಿ ಯಾವ ಸಂಸ್ಥಾನವೂ ಕಾಣದ ಅಭಿವೃದ್ಧಿಯನ್ನು ಕಂಡಿತು. ಮಾದರಿ ಮೈಸೂರು ಎಂಬ ಬಿರುದಿಗೆ ಪಾತ್ರವಾಯಿತು. ನಾಲ್ವಡಿ ಕೃಷ್ಣರಾಜ ಒಡೆಯರು ಸಾಮಾಜಿಕವಾಗಿ, ಶೈಕ್ಷಣಿಕವಾಗಿ, ಆಡಳಿತಾತ್ಮಕವಾಗಿ ಕನ್ನಡನಾಡಿನ ಅಭಿವೃದ್ಧಿಗೆ ಶ್ರಮಿಸಿದರು.

ಇವರ ಆಡಳಿತದ ಅವಧಿಯಲ್ಲಿ ಹೊಸ ರೈಲು ಮಾರ್ಗಗಳನ್ನು ಆರಂಭಿಸಿದರು. ಶಿವನ ಸಮುದ್ರದ ಬಳಿ ಕಾವೇರಿ ನದಿಯಿಂದ ಜಲವಿದ್ಯುತ್ ಉತ್ಪಾದನಾ ಕೇಂದ್ರ

ಪ್ರಾರಂಭವಾಯಿತು. ವಾಣಿವಿಲಾಸ ಸಾಗರ ಮತ್ತು ಕೃಷ್ಣರಾಜಸಾಗರ ಅಣೆಕಟ್ಟುಗಳನ್ನು ಕಟ್ಟಲಾಯಿತು. ಪ್ರಾಥಮಿಕ ಮತ್ತು ಮಾಧ್ಯಮಿಕ ಶಿಕ್ಷಣವನ್ನು ಉಚಿತ ಮತ್ತು ಕಡ್ಡಾಯ ಮಾಡಲಾಯಿತು. ಉನ್ನತ ಶಿಕ್ಷಣಕ್ಕಾಗಿ ಮೈಸೂರು ವಿಶ್ವವಿದ್ಯಾಲಯ ಸ್ಥಾಪಿಸಲಾಯಿತು. 270 ಉಚಿತ ಆಸ್ಪತ್ರೆಗಳನ್ನು ಪ್ರಾರಂಭಿಸಲಾಯಿತು. ಆರ್ಥಿಕ ಅಭಿವೃದ್ಧಿಯ ಸಂಕೇತವಾಗಿ ಮೈಸೂರು ಬ್ಯಾಂಕ್ ಹಾಗೂ ಸಹಕಾರಿ ಸಂಘಗಳನ್ನು ಸ್ಥಾಪಿಸಲಾಯಿತು. ಇಷ್ಟೆಲ್ಲಾ ಕೊಡುಗೆಗಳನ್ನು ನೀಡಿದ ನಾಲ್ವಡಿ ಕೃಷ್ಣರಾಜ ಒಡೆಯರು ಜನತೆಗೆ ರಾಜರ್ಷಿಯಾಗಿ ನಾಡು ಕಂಡ ಧೀಮಂತ ನಾಯಕರಾಗಿ ಪರಿಣಮಿಸಿದರು.

ಪ್ರಶ್ನೆಗಳು :

ಅ) ಮೈಸೂರು ರಾಜ್ಯಕ್ಕೆ ನಾಲ್ವಡಿ ಕೃಷ್ಣರಾಜ ಒಡೆಯರು ನೀಡಿದ ಕೊಡುಗೆಗಳು ಯಾವುವು ?

ಆ) ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಮೈಸೂರು ಮಾದರಿ ಆದದ್ದು ಹೇಗೆ ?

**XII. ಕೆಳಗಿನ ಯಾವುದಾದರೂ ಒಂದು ವಿಷಯವನ್ನು ಕುರಿತು ಪ್ರಬಂಧ ಬರೆಯಿರಿ : 1 × 4 = 4**

37. ಪರಿಸರ ಸಂರಕ್ಷಣೆ ಇಂದಿನ ಅಗತ್ಯತೆ.

**ಅಥವಾ**

ಜ್ಞಾನಾಭಿವೃದ್ಧಿಯಲ್ಲಿ ವೃತ್ತಪತ್ರಿಕೆಗಳ ಪಾತ್ರ.

**XIII. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ :**

**1 × 5 = 5**

38. ನಿಮ್ಮನ್ನು ಬಸವಕಲ್ಯಾಣದ ಸರ್ಕಾರಿ ಪ್ರೌಢಶಾಲೆ ವಿದ್ಯಾರ್ಥಿನಿ 'ಪಾಯಲ್' ಎಂದು ಭಾವಿಸಿಕೊಂಡು, ನಿಮ್ಮ ಶಾಲೆಯಲ್ಲಿ ಆಚರಿಸಿದ 'ಯೋಗ ದಿನಾಚರಣೆ' ಕಾರ್ಯಕ್ರಮ ಕುರಿತು ಬೀದರನಲ್ಲಿರುವ 'ಅಕ್ಷತಾ' ಎಂಬ ಗೆಳತಿಗೆ ಪತ್ರವನ್ನು ಬರೆಯಿರಿ.

**ಅಥವಾ**

ನಿಮ್ಮನ್ನು ಧಾರವಾಡದ ಸಾಧನಕೇರಿ ಬಡಾವಣೆಯಲ್ಲಿ ವಾಸಿಸುತ್ತಿರುವ 'ಆಕಾಶ್' ಎಂದು ಭಾವಿಸಿಕೊಂಡು, ನಿಮ್ಮ ಬಡಾವಣೆಯಲ್ಲಿ ಗ್ರಂಥಾಲಯವನ್ನು ಸ್ಥಾಪಿಸುವಂತೆ ಕೋರಿ ಬೆಂಗಳೂರಿನ ಗ್ರಂಥಾಲಯ ಇಲಾಖೆಯ ನಿರ್ದೇಶಕರಿಗೆ ಒಂದು ಮನವಿ ಪತ್ರವನ್ನು ಬರೆಯಿರಿ.

DO NOT WRITE ANYTHING HERE